ಶಿವಮೊಗ್ಗ ನಗರದಲ್ಲಿ ಖಾಸಗಿ ಬಸ್ ನಿಲ್ದಾಣ.

1490(2 107)

ಶ್ರೀ ಕೆ.ಎಸ್.ಈಶ್ವರಪ್ಪ(ಶಿವಮೊಗ್ಗ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಕೇಂದ್ರವಾದ ಶಿವಮೊಗ್ಗ ನಗರದಲ್ಲಿ ಸೂಕ್ತವಾದ ಹಾಗೂ ವ್ಯವಸ್ಥಿತವಾದ ಖಾಸಗಿ ಬಸ್‌ಗಳ ನಿಲ್ದಾಣವಿಲ್ಲದೇ ಪ್ರಯಾಣಿಕರು ಹಾಗೂ ಬಸ್ ಮಾಲೀಕರು ಪಡುತ್ತಿರುವ ಬವಣೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಸುವ್ಯವಸ್ಥಿತ ಹೊಸ ಖಾಸಗಿ ಬಸ್ ನಿಲ್ದಾಣ ಕಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

ಶ್ರೀ ಮಿರಾಜುದ್ದೀನ್ ಎನ್.ಪಟೇಲ್ (ಪೌರಾಡಳಿತ ರಾಜ್ಯ ಸಚಿವರು):

ಅ) ಹೌದು.

ಆ) ಶಿವಮೊಗ್ಗ ನಗರದಲ್ಲಿ ಹೊಸ ಖಾಸಗಿ ಬಸ್ ನಿಲ್ದಾಣ ಮಾಡಲು ಬಿ.ಹೆಚ್. ರಸ್ತೆಗೆ ಹೊಂದಿಕೊಂಡಿರುವ ಪೋಲೀಸ್ ಇಲಾಖೆಗೆ ಸೇರಿದ ಪೋಲೀಸ್ ಕವಾಯತ್ ಮೈದಾನವೆಂದು ಕರೆಯುವ ಸರ್ಕಾರಿ ಖರಾಬು 03 ಎಕರೆ 03 ಗುಂಟೆ ಜಾಗವನ್ನು ಖಾಸಗಿ ಬಸ್ ನಿಲ್ದಾಣಕ್ಕಾಗಿ ವರ್ಗಾಯಿಸುವ ಪ್ರಸ್ತಾವನೆಯು ಸಚಿವ ಸಂಪುಟದ ಮುಂದೆ ತೀರ್ಮಾನಕ್ಕಾಗಿ ಬಾಕಿ ಇರುತ್ತದೆ.

ಶಿವಮೊಗ್ಗ ನಗರದಲ್ಲಿನ ಅಕ್ರಮ ಮನೆಗಳನ್ನು ಸಕ್ರಮಗೊಳಿಸುವಿಕೆ.

149 1(2 108)

ಶ್ರೀ ಕೆ.ಎಸ್.ಈಶ್ವರಪ್ಪ (ಶಿವಮೊಗ್ಗ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ನಗರದಲ್ಲಿ ಸರ್ಕಾರಿ ಜಾಗ ಮತ್ತು ನಗರಸಭಾ ಜಾಗದಲ್ಲಿ ಅಕ್ರಮವಾಗಿ ಕಟ್ಟಿಕೊಂಡಿರುವ ಮನೆಗಳನ್ನು ಸಕ್ರಮಗೊಳಿಸಲು ಬಂದ ಅರ್ಜಿಗಳ ಸಂಖ್ಯೆ ಎಷ್ಟು?

ಆ) ಅವುಗಳನ್ನು ಸಕ್ರಮಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?